## 81. ಪ್ರವಾಸೋದ್ಯಮಕ್ಕೆ ಸರ್ಕಾರದಿಂದ ಕಿಕ್ ಸ್ಟಾರ್ಟ್

ಕೊರೋನಾ ಹಾಗೂ ಲಾಕ್‌ಡೌನ್‌ನಿಂದ ಕಳಾಹೀನವಾಗಿರುವ ಪ್ರವಾಸೋದ್ಯಮಕ್ಕೆ 'ಕಿಕ್ ಸ್ಟಾರ್ಟ್' ನೀಡಲು ರಾಜ್ಯ ಸರ್ಕಾರ ತಯಾರಿ ನಡೆಸಿದೆ.

ಕನ್ನಡ ಮತ್ತು ಸಂಸ್ಕೃತಿ, ಪ್ರವಾಸೋದ್ಯಮ, ಕ್ರೀಡಾ ಖಾತೆ ಸಚಿವರಾಗಿ ಒಂದು ವರ್ಷದಲ್ಲಿ ಮಾಡಿರುವ ಸಾಧನೆಗಳು ಹಾಗೂ ಮುಂದೆ ಕೈಗೊಳ್ಳಲಿರುವ ಯೋಜನೆ ಕುರಿತಂತೆ ಸುದ್ದಿಗೋಷ್ಠಿ ನಡೆಸಿದ ಸಿ.ಟಿ.ರವಿ, ಕೊರೋನಾದಿಂದ ಆದ ಸಮಸ್ಯೆ ಮತ್ತು ಮುಂದಿನ ಪ್ರಯತ್ನಗಳನ್ನು ವಿವರಿಸಿದರು. ಸ್ಥಗಿತಗೊಂಡಿರುವ ಪ್ರವಾಸೋದ್ಯಮವನ್ನು ಪುನಶ್ಚೇತನಗೊಳಿಸುವ ಹಾಗೂ ಸ್ಥಳೀಯ ಪ್ರವಾಸಿ ತಾಣಗಳನ್ನು ದೇಶದ ಪ್ರವಾಸಿಗರಿಗೆ ಪರಿಚಯಿಸುವ 'ಲವ್ ಯುವರ್ ಲೋಕಲ್' ಪರಿಕಲ್ಪನೆ ಜಾರಿಗೆ ತರಲಾಗುತ್ತಿದೆ ಎಂದರು.

**ಹಲವು ಕಾರ್ಯಕ್ರಮ ಅನುಷ್ಠಾನ:** ಕೊರೋನಾದಿಂದ ದೊಡ್ಡ ಸಂಖ್ಯೆಯಲ್ಲಿ ಉದ್ಯೋಗ ನಷ್ಟವಾಗಿದೆ. ಪ್ರವಾಸೋದ್ಯಮ ಕ್ಷೇತ್ರಕ್ಕೆ ಆರ್ಥಿಕ ಹಿನ್ನಡೆ ಉಂಟಾಗಿದೆ. ಆದರೆ, ಶೀಘ್ರವೇ ಈ ಕ್ಷೇತ್ರ ಚೇತರಿಸಿಕೊಳ್ಳುವ ವಿಶ್ವಾಸವಿದೆ. ಪ್ರವಾಸಿಗರನ್ನು ಆಕರ್ಷಿಸಲು ಆಧುನಿಕ ತಂತ್ರಜ್ಞಾನವನ್ನು ಅಳವಡಿಸಿಕೊಳ್ಳಲಾಗುತ್ತಿದೆ. ಪ್ರವಾಸಿ ತಾಣಗಳಲ್ಲಿರುವ ಆಹ್ಲಾದಕರ ಹವಾಮಾನ, ಕಾಸ್ಮೋಪಾಲಿಟನ್ ಸಂಸ್ಕೃತಿ, ಅತ್ಯುನ್ನತ ಆಡಳಿತ ಪ್ರಕ್ರಿಯೆ, ಹೂಡಿಕೆಗಿರುವ ವಿಪುಲ ಅವಕಾಶ, ಉದ್ಯೋಗ ಸೃಷ್ಟಿ ಸೇರಿ ಹತ್ತು ಹಲವು ಕಾರ್ಯಕ್ರಮಗಳನ್ನು ಅನುಷ್ಠಾನಕ್ಕೆ ತರುವ ಉದ್ದೇಶವಿದೆ ಲಭ್ಯವಿರುವ ಸಂಪನ್ಮೂಲ ಬಳಸಿ ರಾಜ್ಯದ ಪ್ರವಾಸಿ ತಾಣಗಳಿಗೆ ದೇಶ-ವಿದೇಶಗಳಿಂದ ಹೆಚ್ಚಿನ ಪ್ರವಾಸಿಗರನ್ನು ಆಕರ್ಷಿಸಿ, ಮುಂದಿನ 3 ವರ್ಷಗಳಲ್ಲಿ ಕರ್ನಾಟಕ ಪ್ರವಾಸೋದ್ಯಮವನ್ನು ಮೊದಲ ಮುಂಚೂಣಿಗೆ ಕೊಂಡೊಯ್ಯುವ ಗುರಿ ಹೊಂದಲಾಗಿದೆ ಎಂದು ಹೇಳಿದರು.

**ವಿವಿಧೆಡೆ ಅಭಿವೃದ್ಧಿ:** ರಾಜ್ಯದಲ್ಲಿರುವ 25,000ಕ್ಕೂ ಹೆಚ್ಚು ಐತಿಹಾಸಿಕ ಮಹತ್ವವುಳ್ಳ ಸ್ಮಾರಕಗಳು, ದೇವಸ್ಥಾನಗಳನ್ನು ಸಂರಕ್ಷಣೆ ಯೋಜನೆಯಡಿ ಪುನರುಜ್ಜೀವನಗೊಳಿಸುವುದು, ಜಾಗತಿಕ ಪ್ರವಾಸೋದ್ಯಮ ಹೂಡಿಕೆದಾರರ ಸಮಾವೇಶ ಆಯೋಜನೆ, ಜೋಗ ಜಲಪಾತದ ಸಮಗ್ರ ಅಭಿವೃದ್ಧಿ, ಸವದತ್ತಿ ಯಲ್ಲಮ್ಮ ಕ್ಷೇತ್ರದಲ್ಲಿ ಮೂಲಸೌಕರ್ಯ, ಅಂಜನಾದ್ರಿ ಬೆಟ್ಟದ ಸಮಗ್ರ ಅಭಿವೃದ್ಧಿ, ಬಾದಾಮಿ-ಶ್ರೀರಂಗಪಟ್ಟಣದ ಕೋಟೆ ಅಭಿವೃದ್ಧಿಪಡಿಸುವ ಯೋಜನೆ ಹಾಕಿಕೊಳ್ಳಲಾಗಿದೆ. ಮೈಸೂರಿನಲ್ಲಿರುವ ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರವನ್ನು ರೂ.75 ಕೋಟಿ ವೆಚ್ಚದಲ್ಲಿ ಆಧುನಿಕ ಸ್ಪರ್ಶ ನೀಡಲು ವರದಿ ತಯಾರಿಸಲಾಗಿದೆ. ಬಾದಾಮಿ, ವಿಜಯಪುರ, ಹಂಪಿ ಹಾಗೂ ಬೇಲೂರಿನಲ್ಲಿ ಪ್ರವಾಸಿಗರ ಸೌಕರ್ಯಕ್ಕಾಗಿ ರೂ.79.98 ಕೋಟಿ ವೆಚ್ಚದಲ್ಲಿ ತ್ರಿತಾರಾ ಹೋಟೆಲ್ ನಿರ್ಮಿಸಲು ವರದಿ ಸಿದ್ಧಪಡಿಸಲಾಗಿದ್ದು, ಸದ್ಯದಲ್ಲಿಯೇ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಲಾಗುವುದು ಎಂದು ಸಚಿವರು ತಿಳಿಸಿದರು.

ಶಾಸ್ತ್ರೀಯ ಅತ್ಯುನ್ನತ ಅಧ್ಯಯನ ಕೇಂದ್ರವನ್ನು ಮೈಸೂರಿನಲ್ಲಿ ಸ್ಥಾಪಿಸಲಾಗುವುದು. ಇದಕ್ಕೆ ಮೈಸೂರು ವಿವಿಗೆ ಸೇರಿದ ಜಾಗವನ್ನು ನೋಡಲಾಗಿದೆ. ಕೇಂದ್ರ ಮಾನವ ಸಂಪನ್ಮೂಲ ಸಚಿವ ರಮೇಶ್ ಪೋಕ್ರಿಯಾಲ್ ಅವರನ್ನು ಭೇಟಿಯಾಗುತ್ತೇನೆ. ಕೇಂದ್ರ, ಸ್ಥಾಪನೆಗೆ ಅನುಮೋದನೆ ನೀಡಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

**ಮುಂದಿನ ಯೋಜನೆಗಳು**

- ಚಿತ್ರದುರ್ಗ, ಶಿವಮೊಗ್ಗ ಮತ್ತು ದಾವಣಗೆರೆ ಜಿಲ್ಲೆಯಲ್ಲಿರುವ ಪ್ರಮುಖ ಪ್ರವಾಸಿ ತಾಣಗಳನ್ನು ಗುರುತಿಸಿ ಪ್ರವಾಸಿ ಮೂಲಸೌಲಭ್ಯ ಅಭಿವೃದ್ಧಿಪಡಿಸಲು ಪ್ರಸ್ತಾವನೆಯನ್ನು ಕೇಂದ್ರ ಪ್ರವಾಸೋದ್ಯಮ ಮಂತ್ರಾಲಯಕ್ಕೆ ಸಲ್ಲಿಸಲಾಗಿದೆ.
- 2020-25ರ ಪ್ರವಾಸೋದ್ಯಮ ನೀತಿ ಮುಂದಿನ ತಿಂಗಳು ಜಾರಿಗೆ ಬರಲಿದ್ದು, ಈ ಮೂಲಕ ಸ್ಥಳೀಯರಿಗೆ ಉದ್ಯೋಗ, ಪ್ರವಾಸಿತಾಣಗಳ ಸರ್ವಾಂಗೀಣ ಅಭಿವೃದ್ಧಿ, ಮೂಲಸೌಕರ್ಯಗಳಿಗೆ ಒತ್ತು ಹಾಗೂ ಪ್ರವಾಸಿಗರನ್ನು ಆಕರ್ಷಿಸಲು ಇಲಾಖೆಯಿಂದ ವಿವಿಧ ಯೋಜನೆ ಜಾರಿ.
- ಪ್ರಾದೇಶಿಕ ಮಟ್ಟದಲ್ಲಿ ಆಹಾರ ಮೇಳಗಳನ್ನು ನಡೆಸಿ, ಖಾದ್ಯಪ್ರಿಯರನ್ನು ಸೆಳೆಯುವ ಮೂಲಕ ಪ್ರವಾಸೋದ್ಯಮ ಬೆಳೆಸಲು ಅವಕಾಶವಿದೆ. ಹಲವು ಬಗೆಯ ಪ್ರವಾಸೋದ್ಯಮವನ್ನು ಸರ್ಕಾರಿ ಮತ್ತು ಖಾಸಗಿ ಸಹಭಾಗಿತ್ವದಲ್ಲಿ ಅಭಿವೃದ್ಧಿಪಡಿಸುವ ಚಿಂತನೆ.

- ರಾಜ್ಯದಲ್ಲಿ ಈವರೆಗೆ 319 ಪ್ರವಾಸಿ ತಾಣ ಗುರುತಿಸಲಾಗಿದೆ. ಆ ಪೈಕಿ ಪ್ರಮುಖವಾಗಿ 20 ಪ್ರವಾಸಿ ತಾಣಗಳ ಅಭಿವೃದ್ಧಿಗೆ ಸಂಬಂಧಿಸಿದಂತೆ ನೀಲಿನಕ್ಷೆ ಸಿದ್ಧಪಡಿಸಲಾಗಿದ್ದು, ಶೀಘ್ರದಲ್ಲೇ ಅನುಷ್ಠಾನ ಮಾಡಲಾಗುವುದು.

- ಆದಿವಾಸಿ ಮತ್ತು ಬಂಜಾರಾ ಕಲ್ಚರಲ್ ಹೆರಿಟೇಜ್ ನಿರ್ಮಾಣದ ಕಲ್ಪನೆಗೆ ಚಾಲನೆ ನೀಡಲಾಗಿದೆ. ಕೃಷಿ, ತೋಟಗಾರಿಕೆ ಹಾಗೂ ಪ್ರವಾಸೋದ್ಯಮ ಇಲಾಖೆಯ ಜಂಟಿ ಸಹಯೋಗದಲ್ಲಿ ಕೃಷಿ ಸಂಸ್ಕೃತಿಯನ್ನು ಪ್ರವಾಸಿಗರಿಗೆ ಕಟ್ಟಿಕೊಡಲು ಅಗ್ರಿ ಟೂರಿಸಂನಿಂದ ಯೋಜನೆ ರೂಪಿಸಲಾಗುತ್ತಿದೆ.

- 10 ವರ್ಷಗಳಿಂದ ಸ್ಥಗಿತಗೊಳಿಸಲಾಗಿದ್ದ ಗೋಲ್ಡನ್ ಚಾರಿಯೇಟ್ ರೈಲು ಸಂಚಾರ ಮರುಚಾಲನೆಗೆ ಕ್ರಮ ಕೈಗೊಳ್ಳಲಾಗಿದೆ. ಈ ಸಂಬಂಧ ಭಾರತೀಯ ರೈಲ್ವೆ ನಿಗಮದೊಂದಿಗೆ ಒಪ್ಪಂದ ಮಾಡಿಕೊಳ್ಳಲಾಗಿದೆ.

ಆಧಾರ:ವಿಜಯವಾಣಿ, ದಿನಾಂಕ:28.08.2020